ಗ್ರಾಮೀಣ ರಸ್ತೆಗಳ ದುರಸ್ತಿ ಕಾರ್ಯ

1425(2589), ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಅ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಗೊಳಪಡುವ ರಸ್ತೆಗಳು ಸಂಪೂರ್ಣ ಹಾಳಾಗಿದ್ದು ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ರಸ್ತೆಗಳನ್ನು ದುರಸ್ತಿಪಡಿಸಿ ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಪ್ರಸಕ್ತ ಸಾಲಿನಲ್ಲಿ ಈ ರಸ್ತೆಗಳ ಅಭಿವೃದ್ಧಿಗಾಗಿ ಸರ್ಕಾರದ ವತಿಯಿಂದ ವಿಶೇಷ ಯೋಜನೆಯನ್ನು ರೂಪಿಸಲಾಗಿದೆಯೇ;

ಈ) ಹಾಗಿದ್ದಲ್ಲಿ ಪ್ರಸಕ್ತ ಸಾಲಿಗೆ ಒದಗಿಸಲಾಗಿರುವ ಅನುದಾನ ಮೊತ್ತ ಎಷ್ಟು? (ವಿವರ ನೀಡುವುದು)

ಶ್ರೀ ಹೆಚ್.ಕೆ.ಪಾಟೀಲ್(ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಈ ಕ್ಷೇತ್ರ ವ್ಯಾಪ್ತಿಯ ಕೆಲವು ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಪ್ರತಿವರ್ಷ ಗ್ರಾಮೀಣ ರಸ್ತೆಗಳ ನಿರ್ವಹಣೆ/ಅಭಿವೃದ್ಧಿಗಾಗಿ ವಿವಿಧ ಕಾರ್ಯಕ್ರಮ/ಲೆಕ್ಕಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿಗಳಿಗೆ ಅನುದಾನ ಒದಗಿಸಲಾಗುತ್ತಿದೆ. ಜಿಲ್ಲಾ ಪಂಚಾಯತಿಗೆ ಲಭ್ಯವಾಗುವ ಅನುದಾನಕ್ಕೆ ಅನುಗುಣವಾಗಿ ಜಿ.ಪಂ.ಗಳಲ್ಲಿ ಕ್ರಿಯಾ ಯೋಜನೆ ರೂಪಿಸಿ ರಸ್ತೆ ನಿರ್ವಹಣೆ/ ಅಭಿವೃದ್ಧಿಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುವುದು.

ಕಳೆದ ಸಾಲಿನಲ್ಲಿ ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದಲ್ಲಿ ಕೆಳಕಂಡ ವಿವಿಧ ಯೋಜನೆಗಳಡಿ ಗ್ರಾಮೀಣ ರಸ್ತೆಗಳ ಅಭಿವೃದ್ಧಿಪಡಿಸಲಾಗಿದೆ.

ಕ್ರ. ಸಂ.	ಯೋಜನೆ	ಮೊತ್ತ (₹ ಲಕ್ಷಗಳಲ್ಲಿ)
1	ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ – 3054	60.25
2	13ನೇ ಹಣಕಾಸು ಯೋಜನೆ	133.50
3	3054 – ಯೋಜನೇತರ	65.40

ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ–1ರಡಿ 0.70 ಕಿ.ಮೀ. ಉದ್ದದ 1 ರಸ್ತೆ ಕಾಮಗಾರಿ ಹಾಗೂ ಯೋಜನೆ–2ರಡಿ 10.69 ಕಿ.ಮೀ. ಉದ್ದದ 2 ರಸ್ತೆ ಕಾಮಗಾರಿಗಳನ್ನು ಕೈಗೊಂಡಿದ್ದು, ಕಾಮಗಾರಿಗಳು ಪ್ರಗತಿಯಲ್ಲಿದೆ. ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ–2 ರಡಿ 30.00 ಕಿ.ಮೀ. ಉದ್ದದ 24 ರಸ್ತೆ ಕಾಮಗಾರಿಗಳನ್ನು ಕೈಗೊಂಡಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ.

ಇ) **ಮತ್ತು ಈ)** ಪ್ರಸಕ್ತ 2014–15ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತಿ ಕಾರ್ಯಕ್ರಮದಡಿ ಚನ್ನರಾಯಪಟ್ಟಣ ತಾಲ್ಲೂಕಿನ ಗ್ರಾಮೀಣ ರಸ್ತೆಗಳ ಅಭಿವೃದ್ಧಿ/ನಿರ್ವಹಣೆಗಾಗಿ ಕೆಳಕಂಡ ಯೋಜನೆಗಳಡಿ ಅನುದಾನ ಒದಗಿಸಿದ್ದು, ಅದರಂತೆ, ಜಿ.ಪಂ.ನಲ್ಲಿ ಕ್ರಿಯಾ ಯೋಜನೆ ತಯಾರಿಸಿ, ಅನುಮೋದನೆ ಪಡೆದು, ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತದೆ.

ಕ್ರ. ಸಂ.	ಯೋಜನೆ	ಮೊತ್ತ (₹ ಲಕ್ಷಗಳಲ್ಲಿ)
1	ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ – 3054	58.00
2	13ನೇ ಹಣಕಾಸು ಯೋಜನೆ	97.34
3	3054 – ಯೋಜನೇತರ	94.99